# Government of Karnataka
# Karnataka Examinations Authority

Office of the Executive Director,
Karnataka Examinations Authority,
18th Cross, Malleshwaram,
Sampige Road, BANGALORE – 560 012.

## CIRCULAR

### Time Table and SCHEDULE OF BELL TIMINGS for COMMON ENTRANCE TEST – 2026

**Time Table**

| Date | Day | Timings | Subject | Questions / Marks |
|---|---|---|---|---|
| 23-04-2026 | THURSDAY | 10.30 am – 11.50 am | **Physics** | 60 |
| | | 02.30 pm – 03.50 pm | **Chemistry** | 60 |
| 24-04-2026 | FRIDAY | 10.30 am – 11.50 am | **Mathematics** | 60 |
| | | 02.30 pm – 03.50 pm | **Biology** | 60 |

THERE WILL BE NO NEGATIVE EVALUATION WITH REGARD TO WRONG / INCORRECT ANSWERS BUT MARKS WILL NOT BE AWARDED IN RESPECT OF MULTIPLE ANSWERS for the same question.

## SCHEDULE OF BELL TIMINGS

**This SCHEDULE should be observed scrupulously without any variation or scope for complaints whatsoever.**

| Sl. No | BELL NUMBER | MORNING SESSION. (PHYSICS / MATHS) | AFTERNOON SESSION. (CHEMISTRY / BIOLOGY) | PARTICULARS |
|---|---|---|---|---|
| 1 | FIRST BELL | 10.20 AM | 2.20 PM | ▪ **"Candidates will be permitted to enter and take their seats in the examination hall only upon showing their CET-2026 Admission Ticket along with a Valid Identity Card."**<br>▪ **The invigilator must carefully verify the photograph on the Admission Ticket, Identity Card, and Nominal Roll matches the candidate present for the examination, and then only;**<br>▪ **The invigilator should distribute the OMR Answer Sheets** only **to the candidates present in the examination hall. Candidates must write their names in** CAPITAL LETTERS **on the OMR Answer Sheet.**<br>▪ **Afterwards candidates have to carefully enter the CET Number and shade the respective circle on the** OMR **Answer Sheet. (Check the CET Number entered and shaded on the** OMR **answer sheet)**<br>▪ **The candidates should verify the CET No. written on the OMR Answer Sheet with that of the CET No. printed on the Admission Ticket.** |
| 2 | SECOND BELL | 10.30 AM | 2.30 PM | ▪ The Deputy Chief Superintendent / Custodian should distribute the sealed Question Paper packet to room invigilators in the examination hall at 10.30 A.M. / 2.30 P.M.<br>▪ The Invigilator should loudly announce by showing the sealed Question Paper packet to the candidates present in the examination hall "THE SEAL OF THE QUESTION PAPER PACKET IS FULLY INTACT. NOW, I REQUEST ANY TWO CANDIDATES PRESENT HERE TO CERTIFY THE SAME ON THIS PACKET, SO THAT I CAN OPEN THE SEAL OF THE QUESTION PAPER PACKET" and should obtain signatures of any TWO candidates present in the examination hall, in the space provided on the packet.<br>▪ The Invigilator should open the Question Paper packet and distribute the question booklets in the prescribed manner ONLY at 10.35 A.M. / 2.35 P.M. to the candidates present in the examination hall.<br>Note: Only INVIGILATORS are authorized to open the seal of the Question Paper packet in the manner prescribed above. The other staffs involved in exam duty (including the Deputy Chief Superintendent / Custodian / Chairman / Secretary / President / Administrator etc.) are not authorized to open the seal of Question Paper packet.<br>▪ The candidates should carefully enter the Version Code of the question booklet and shade the respective circle on the space provided on the OMR Answer Sheet. They should also affix their signature on bottom portion of the OMR Answer Sheet, in the box provided.<br>▪ Candidates have to write the question booklet version code & serial number on the Nominal Roll and affix their signature on the Nominal Roll. Invigilator should verify the candidate's signature with the signature printed on the Nominal Roll.<br>▪ Candidates should verify the entries in the Nominal Roll with that of the details printed on the Question Booklet / OMR Answer Sheet issued to them.<br>▪ Until the third bell is rung, the candidates should not be allowed either to look inside the question booklet or to start answering on the OMR Answer Sheet. |
| 3 | THIRD BELL | 10.40 AM | 2.40 PM | ▪ The candidates should be allowed to open the question booklet and to start answering on the OMR Answer Sheet.<br>▪ After this bell at 10.40 A.M. / 2.40 P.M., the candidates should not be allowed either to enter OR to leave the examination hall, till the completion of the session. |
| 4 | FOURTH BELL | 11.10 AM | 3.10 PM | ▪ This is a first caution bell–the Invigilators should inform all the candidates "HALF AN HOUR OF EXAMINATION COMPLETED". |
| 5 | FIFTH BELL | 11.30 AM | 3.30 PM | ▪ This is a second caution bell – and the Invigilators should inform all the candidates "TWENTY MINUTES ARE REMAINING FOR THE EXAMINATION TO END". |
| 6 | SIXTH BELL | 11.45 AM | 3.45 PM | ▪ This is a LAST caution bell and the Invigilators should inform all the candidates "ONLY FIVE MINUTES ARE REMAINING FOR THE EXAMINATION TO END". |
| 7 | SEVENTH & LAST BELL | 11.50 AM | 3.50 PM | ▪ End of the examination. Soon after this bell, the Invigilator should first ensure that all the candidates have stopped answering on the OMR Answer Sheet. The Invigilator should collect the OMR Answer Sheets as it is from the candidates.<br>IMPORTANT: Before allowing the candidates to leave the examination hall, the Invigilators must ensure that they have collected the OMR Answer Sheets from all the candidates.<br>▪ Invigilator should separate the TOP sheet of the OMR Answer Sheet (OFFICE COPY) carefully and will retain the same with them.<br>▪ The Invigilator should return the bottom sheet replica (CANDIDATE COPY) to the respective candidates, along with their question booklets. |

NOTE: The following misdeeds will attract disciplinary actions and criminal prosecution:

Breach of silence, use of books / notes / manuscripts, etc., pertaining to the subject in the examination hall; Talking or signaling to other candidates, candidates copying from the OMR Answer Sheets of the other candidates or from other source. Sending of OMR Answer Sheet or question paper out of the examination hall. Impersonation; Tearing of OMR Answer Sheet; any other examination misconduct.

**Sd/- Executive Director.**

ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಕಾರ್ಯನಿರ್ವಾಹಕ ನಿರ್ದೇಶಕರ ಕಛೇರಿ,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-560 012.

# ಸುತ್ತೋಲೆ

ಸಾಮಾನ್ಯ ಪ್ರವೇಶ ಪರೀಕ್ಷೆ-2026ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ.

**ವೇಳಾಪಟ್ಟಿ**

| ದಿನಾಂಕ | ದಿನ | ಸಮಯ | ವಿಷಯ | ಪ್ರಶ್ನೆಗಳು / ಅಂಕಗಳು |
|---|---|---|---|---|
| **23-04-2026** | ಗುರುವಾರ | ಬೆಳಿಗ್ಗೆ 10-30 ರಿಂದ 11-50 ರವರೆಗೆ | ಭೌತಶಾಸ್ತ್ರ (Physics) | 60 |
| | | ಮಧ್ಯಾಹ್ನ 2-30 ರಿಂದ 3-50 ರವರೆಗೆ | ರಸಾಯನಶಾಸ್ತ್ರ (Chemistry) | 60 |
| **24-04-2026** | ಶುಕ್ರವಾರ | ಬೆಳಿಗ್ಗೆ 10-30 ರಿಂದ 11-50 ರವರೆಗೆ | ಗಣಿತ (Mathematics) | 60 |
| | | ಮಧ್ಯಾಹ್ನ 2-30 ರಿಂದ 3-50 ರವರೆಗೆ | ಜೀವಶಾಸ್ತ್ರ (Biology) | 60 |

ತಪ್ಪು ಉತ್ತರಗಳಿಗೆ ಯಾವುದೇ ಋಣಾತ್ಮಕ ಮೌಲ್ಯಮಾಪನ ವಿರುವುದಿಲ್ಲ ಆದರೆ ಒಂದೇ ಪ್ರಶ್ನೆಗೆ ಒಂದಕ್ಕಿಂತ ಹೆಚ್ಚು ಉತ್ತರಗಳಿಗೆ ಶೇಡ್ ಮಾಡಿದ್ದಲ್ಲಿ ಅಂಕಗಳನ್ನು ನೀಡಲಾಗುವುದಿಲ್ಲ.

## ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ. ಸಂ | ಬೆಲ್ ಸಂಖ್ಯೆ | ಬೆಳಗಿನ ಅವಧಿ. (ಭೌತಶಾಸ್ತ್ರ / ಗಣಿತ) | ಮಧ್ಯಾಹ್ನದ ಅವಧಿ. (ರಸಾಯನಶಾಸ್ತ್ರ / ಜೀವಶಾಸ್ತ್ರ) | ವಿವರಗಳು |
|---|---|---|---|---|
| 1 | ಮೊದಲನೇ ಬೆಲ್ | ಬೆ.10.20 | ಮ. 2.20 | • ಸಿಇಟಿ-2026 ರ ಪ್ರವೇಶ ಪತ್ರವನ್ನು ಮತ್ತು ಮಾನ್ಯತೆ ಇರುವ ಗುರುತಿನ ಚೀಟಿಯನ್ನು ತೋರಿಸಿದರೆ ಮಾತ್ರ, ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಲು ಮತ್ತು ತಮ್ಮ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರ, ಗುರುತಿನ ಚೀಟಿ ಮತ್ತು ನಾಮಿನಲ್ ರೋಲ್ ನಲ್ಲಿ ಮುದ್ರಿತವಾಗಿರುವ ಭಾವಚಿತ್ರವು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಗೆ ಹೋಲಿಕೆಯಾಗುತ್ತದೆಯೆ ಎಂದು ಪರಿಶೀಲಿಸಬೇಕು, ನಂತರವೇ;<br>• ಕೊಠಡಿ ಮೇಲ್ವಿಚಾರಕರು ಹಾಜರಿದ್ದ ಅಭ್ಯರ್ಥಿಗಳಿಗೆ OMR ಉತ್ತರ ಪತ್ರಿಕೆಯನ್ನು ವಿತರಿಸುತ್ತಾರೆ. ಅಭ್ಯರ್ಥಿಗಳು OMR ಉತ್ತರ ಪತ್ರಿಕೆಯಲ್ಲಿ ತಮ್ಮ ಹೆಸರನ್ನು **ದಪ್ಪಕ್ಷರಗಳಲ್ಲಿ** (ಕ್ಯಾಪಿಟಲ್ ಲೆಟರ್ಸ್) ಬರೆಯಬೇಕು.<br>• ನಂತರ ಅಭ್ಯರ್ಥಿಗಳು OMR ಉತ್ತರ ಪತ್ರಿಕೆಯಲ್ಲಿ ಎಚ್ಚರಿಕೆಯಿಂದ CET ಸಂಖ್ಯೆಯನ್ನು ಬರೆದು ಆಯಾ ವೃತ್ತಗಳನ್ನು ತಪ್ಪದೇ ಶೇಡ್ ಮಾಡಬೇಕು.<br>• ಅಭ್ಯರ್ಥಿಗಳು ತಾವು OMR ಉತ್ತರ ಪತ್ರಿಕೆಯಲ್ಲಿ ಬರೆದಿರುವ CET ಸಂಖ್ಯೆಯನ್ನು, ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ CET ಸಂಖ್ಯೆಗೆ ಅನುಗುಣವಾಗಿದೆಯೆ ಎಂದು ಪರಿಶೀಲಿಸಿಕೊಳ್ಳಬೇಕು. (ಮತ್ತೊಮ್ಮೆ ಪರಿಶೀಲಿಸುವುದು ಸೂಕ್ತ.) |
| 2 | ಎರಡನೇ ಬೆಲ್ | ಬೆ.10.30 | ಮ. 2.30 | • ಎರಡನೆಯ ಬೆಲ್ ಬೆ. 10.30 / ಮ. 2.30 ಕ್ಕೆ, ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. **"ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ"**. ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>• ಬೆ. 10.35 / ಮ. 2.35 – ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆದು, ನಂತರ ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ / ಸಿಬ್ಬಂದಿ ವರ್ಗ / ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯಲ್ಲಿನ ವರ್ಷನ್ ಕೋಡ್ ಅನ್ನು OMR ಉತ್ತರ ಪತ್ರಿಕೆಯಲ್ಲಿನ ನಿಗದಿತ ಜಾಗದಲ್ಲಿ ಬರೆದು ಅದಕ್ಕೆ ಸಂಬಂಧಿಸಿದ ವೃತ್ತಗಳನ್ನು ತುಂಬಬೇಕು. ನಂತರ ಅಭ್ಯರ್ಥಿಗಳು OMR ನಲ್ಲಿ ನಿಗದಿತ ಜಾಗದಲ್ಲಿ ಸಹಿಯನ್ನು ಮಾಡುವುದು.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯಲ್ಲಿನ Version Code ಮತ್ತು Serial Number ನ್ನು ನಾಮಿನಲ್ ರೋಲ್ ನಲ್ಲಿ ಬರೆಯಬೇಕು, ನಂತರ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ.<br>• ಅಭ್ಯರ್ಥಿಗಳು ನಾಮಿನಲ್ ರೋಲ್ ನಲ್ಲಿ ಬರೆದಿರುವ ವಿವರಗಳನ್ನು ತಮಗೆ ನೀಡಿರುವ ಪ್ರಶ್ನೆಪತ್ರಿಕೆ ಮತ್ತು OMR ಉತ್ತರ ಪತ್ರಿಕೆಯಲ್ಲಿ ಮುದ್ರಿತವಾಗಿರುವ ವಿವರಗಳೊಂದಿಗೆ ಪರಿಶೀಲಿಸಬೇಕು.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ OMR ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ. |
| 3 | ಮೂರನೇ ಬೆಲ್ | ಬೆ.10.40 | ಮ.2.40 | • ಈ ಬೆಲ್ ಆದ ನಂತರ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯನ್ನು ತೆರೆದು OMR ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಪ್ರಾರಂಭಿಸಲು ಅವಕಾಶ ಕೊಡಲಾಗುವುದು.<br>• ಬೆ. 10.40 / ಮ. 2.40 ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಹೊರ ಹೋಗಲು ಅವಕಾಶವಿರುವುದಿಲ್ಲ. |
| 4 | ನಾಲ್ಕನೇ ಬೆಲ್ | ಬೆ.11.10 | ಮ.3.10 | •ಇದು ಮೊದಲನೆಯ ಎಚ್ಚರಿಕೆ ಬೆಲ್ – ಪರೀಕ್ಷೆಯ ಅರ್ಧ ಗಂಟೆಯ ಅವಧಿ ಮುಗಿದಿರುವುದಕ್ಕಾಗಿ ಎಂದು ಮೇಲ್ವಿಚಾರಕರು ತಿಳಿಸುತ್ತಾರೆ |
| 5 | ಐದನೇ ಬೆಲ್ | ಬೆ.11.30 | ಮ.3.30 | •ಇದು ಎರಡನೆಯ ಎಚ್ಚರಿಕೆ ಬೆಲ್ – ಪರೀಕ್ಷೆ ಮುಗಿಯಲು ಇಪ್ಪತ್ತು ನಿಮಿಷಗಳು ಬಾಕಿ ಉಳಿದಿವೆ ಎಂದು ಮೇಲ್ವಿಚಾರಕರು ತಿಳಿಸುತ್ತಾರೆ |
| 6 | ಆರನೇ ಬೆಲ್ | ಬೆ.11.45 | ಮ.3.45 | •ಇದು ಕೊನೆಯ ಎಚ್ಚರಿಕೆಯ ಬೆಲ್ – ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ. |
| 7 | ಏಳನೇ ಹಾಗೂ ಕೊನೆಯ ಬೆಲ್ | ಬೆ.11.50 | ಮ. 3.50 | • ಪರೀಕ್ಷೆ ಮುಕ್ತಾಯ. ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಎಲ್ಲಾ ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು. ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ OMR ಉತ್ತರ ಪತ್ರಿಕೆಯನ್ನು ಪಡೆಯುವುದು.<br>• ಪರೀಕ್ಷೆಗೆ ಹಾಜರಾದ ಎಲ್ಲಾ ಅಭ್ಯರ್ಥಿಗಳಿಂದ OMR ಉತ್ತರ ಪತ್ರಿಕೆಯನ್ನು ಪಡೆಯಲಾಗಿದೆ ಎಂದು ಖಾತ್ರಿ ಪಡಿಸಿಕೊಂಡ ನಂತರ ಮಾತ್ರ ಅಭ್ಯರ್ಥಿಗಳನ್ನು ಕೊಠಡಿಯಿಂದ ಹೊರಗೆ ಹೋಗಲು ಮೇಲ್ವಿಚಾರಕರು ಅವಕಾಶ ನೀಡಬೇಕು.<br>• ಕೊಠಡಿ ಮೇಲ್ವಿಚಾರಕರು OMR ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕಚೇರಿ ಪ್ರತಿ) ಜಾಗರೂಕತೆಯಿಂದ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು OMR ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಹಿಂದಿರುಗಿಸಬೇಕು. |

ಗಮನಿಸಿ: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಲ್ಲಿ ಈ ಕೆಳಕಂಡ ರೀತಿಯ ತಪ್ಪುಗಳನ್ನು ಎಸಗಿದರೆ ಅಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತು ಕ್ರಮ ಹಾಗು ಅಪರಾಧ ಮೊಕದ್ದಮೆಯನ್ನು ಹೂಡಲಾಗುವುದು:

ಗಲಾಟೆ ಮಾಡಿದರೆ / ನಿಶ್ಯಬ್ಧತೆಯನ್ನು ಕಾಪಾಡದಿದ್ದರೆ; ಪರೀಕ್ಷಾ ಸಮಯದಲ್ಲಿ ವಿಷಯಕ್ಕೆ ಸಂಬಂಧಿಸಿದ ಪುಸ್ತಕ, ಚೀಟಿ ಇತ್ಯಾದಿಗಳನ್ನು ಬಳಸಿದರೆ; ಬೇರೆ ಅಭ್ಯರ್ಥಿಗಳ ಜೊತೆ ಮಾತನಾಡಿದರೆ ಅಥವಾ ಸಂಜ್ಞೆ ಮಾಡಿದರೆ; ಅಭ್ಯರ್ಥಿಯು ಬೇರೆ ಅಭ್ಯರ್ಥಿಗಳ ಉತ್ತರ ಪತ್ರಿಕೆಯಿಂದ ಅಥವಾ ಇನ್ನಾವುದೇ ಮೂಲಗಳಿಂದ ನಕಲು ಮಾಡುತ್ತಿದ್ದರೆ; ಅಭ್ಯರ್ಥಿಯು ತನ್ನ ಓಎಂಆರ್ ಉತ್ತರ ಪತ್ರಿಕೆ ಬೇರೆ ಕಡೆ ವರ್ಗಾಯಿಸಿದರೆ; ಬದಲಿ ಅಭ್ಯರ್ಥಿಯಾಗಿದ್ದರೆ; ಪರೀಕ್ಷಾ ಅವಧಿಯಲ್ಲಿ ಅಥವಾ ಪರೀಕ್ಷೆಯ ನಂತರ ಓಎಂಆರ್ ಉತ್ತರ ಪತ್ರಿಕೆಯನ್ನು ಪರೀಕ್ಷಾ ಕೊಠಡಿಯಿಂದ ಹೊರಗಡೆ ತೆಗೆದುಕೊಂಡು ಹೋದಲ್ಲಿ; ಉತ್ತರ ಪತ್ರಿಕೆಯನ್ನು ಹರಿದು ಹಾಕುವುದು ಅಥವಾ ಇನ್ನಾವುದೇ ಪರೀಕ್ಷಾ ಅವ್ಯವಹಾರಗಳು ಕಂಡು ಬಂದಲ್ಲಿ.

ಸಹಿ/-ಕಾರ್ಯನಿರ್ವಾಹಕ ನಿರ್ದೇಶಕರು.

ಕರ್ನಾಟಕ ಸರ್ಕಾರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಕನ್ನಡ ಭಾಷಾ ಪರೀಕ್ಷೆ–2026ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ (ಯುಜಿಸಿಇಟಿ – 2026)

ವೇಳಾಪಟ್ಟಿ

| ದಿನಾಂಕ | ದಿನ | ಪರೀಕ್ಷಾ ಸಮಯ |
|---|---|---|
| 22–04–2026 | ಬುಧವಾರ | ಬೆಳಿಗ್ಗೆ 10.30 ರಿಂದ 11.30 ರ ವರೆಗೆ |

## ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ.ಸಂ | ಬೆಲ್ ಸಂಖ್ಯೆ | ಸಮಯ | ವಿವರಗಳು |
|---|---|---|---|
| 01 | ಮೊದಲನೇ ಬೆಲ್ | ಬೆ. 10.10 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿಯನ್ನು ತೋರಿಸಿದ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಮತ್ತು ಗುರುತಿನ ಚೀಟಿಯೊಂದಿಗೆ ಪರಿಶೀಲಿಸುತ್ತಾರೆ ಮತ್ತು ಪ್ರವೇಶ ಪತ್ರದಲ್ಲಿ ಸಹಿ ಮಾಡುತ್ತಾರೆ. |
| 02 | ಎರಡನೇ ಬೆಲ್ | ಬೆ. 10.20 | • **ಬೆ.10.20** ಕ್ಕೆ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯ ಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು "ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ" ಎಂದು ತೋರಿಸುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯ ಲಕೋಟೆಯನ್ನು ತೆರೆಯಲು (Question Paper cum Answer Sheet Booklet) ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಅಧಿಕಾರಿ / ಸಿಬ್ಬಂದಿ ವರ್ಗ/ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಬೆ. 10.25ಕ್ಕೆ ಅಭ್ಯರ್ಥಿಗಳಿಗೆ (Question Paper cum Answer Sheet Booklet) ಪ್ರಶ್ನೆ ಪತ್ರಿಕೆ ಸಮೇತ ಉತ್ತರ ಪತ್ರಿಕೆಯನ್ನು ಹೊಂದಿರುವ ಲಕೋಟೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ. ಅಭ್ಯರ್ಥಿಗಳು ಅದರಲ್ಲಿ ಎಚ್ಚರದಿಂದ ಸಿಇಟಿ ಸಂಖ್ಯೆಯನ್ನು ಮತ್ತು ಜನನ ದಿನಾಂಕವನ್ನು ಬರೆಯಬೇಕು.<br>• ಅಭ್ಯರ್ಥಿಗಳು ಎಚ್ಚರದಿಂದ ವರ್ಷನ್ ಕೋಡ್ ಮತ್ತು ಪ್ರಶ್ನೆ ಪತ್ರಿಕೆಯ ಕ್ರಮ ಸಂಖ್ಯೆಯನ್ನು ನಾಮಿನಲ್ ರೋಲ್‌ನಲ್ಲಿ ಬರೆಯಬೇಕು. ನಂತರ ಪ್ರಶ್ನೆ ಪತ್ರಿಕೆ ಸಮೇತ ಉತ್ತರ ಪತ್ರಿಕೆಯ ನಿಗದಿತ ಜಾಗದಲ್ಲಿ ಸಹಿಯನ್ನೂ ಮಾಡಬೇಕು.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಬೆ.10.30 | • ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಸಮೇತ ಇರುವ ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>• ಈ ಬೆಲ್ ಅಂದರೆ ಬೆ.10.30 ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಬೆ.11.00 | • ಇದು ಮೊದಲನೆಯ ಎಚ್ಚರಿಕೆಯ ಬೆಲ್, ಕೊಠಡಿ ಮೇಲ್ವಿಚಾರಕರು **ಅಭ್ಯರ್ಥಿಗಳಿಗೆ, ಪರೀಕ್ಷೆಯ ಅರ್ಧಗಂಟೆಯ ಅವಧಿಯು ಮುಗಿದಿದೆ ಎಂದು ತಿಳಿಸುತ್ತಾರೆ.** |
| 05 | ಐದನೇ ಬೆಲ್ | ಬೆ.11.25 | • ಇದು ಎರಡನೆಯ ಹಾಗು ಕೊನೆಯ ಎಚ್ಚರಿಕೆಯ ಬೆಲ್, ಕೊಠಡಿ ಮೇಲ್ವಿಚಾರಕರು **ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ.** |
| 06 | ಆರನೆಯ ಹಾಗೂ ಕೊನೆಯ ಬೆಲ್ | ಬೆ.11.30 | • ಪರೀಕ್ಷೆ ಮುಕ್ತಾಯ.<br>• ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಸಮೇತ ಇರುವ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯನ್ನು ಪಡೆಯುವುದು.<br>• ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು. |

ಸಹಿ/–

ಕಾರ್ಯನಿರ್ವಾಹಕ ನಿರ್ದೇಶಕರು